(ಇಂದು ದಿನಾಂಕಃ 26–06–2025 ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

ಮುಖ್ಯ ವಿಚಾರಣೆ ಃ ಶ್ರೀ ಪಿ ಎಂ ಡಿ ವಕೀಲರಿಂದ ಃ-

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯ ನಾನೇ ಹೇಳಿ ಬರೆಸಿದ್ದು ಅದು ಸತ್ಯವಾಗಿರುತ್ತದೆ.

1) ದಿನಾಂಕ 16-04-2019 ರ ಕೈಗಡ ಪತ್ರದ ಮೂಲ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರ 02 ಪುಟಗಳ ಮೇಲೆ ಪ್ರತಿವಾದಿಯ ಸಹಿಯನ್ನು ಗುರುತಿಸಿದ್ದು ಅದನ್ನು ಕ್ರಮವಾಗಿ ನಿ.ಪಿ.1(ಎ) ಮತ್ತು ನಿ.ಪಿ.1(ಬಿ) ಎಂದು ಗುರುತಿಸಲಾಯಿತು. ನಿಪಿ-1 ರ 2 ಪುಟಗಳ ಮೇಲೆ ಸಾಕ್ಷಿ ತಮ್ಮ ಸಹಿಯನ್ನು ಗುರುತಿಸಿದ್ದು ಅವುಗಳನ್ನು ನಿ.ಪಿ.1(ಸಿ) ಹಾಗೂ ನಿ.ಪಿ.1(ಡಿ) ಎಂದು ಗುರುತಿಸಲಾಯಿತು.

2) ದಿನಾಂಕ 08-07-2024 ರಂದು ಪ್ರತಿವಾದಿಗೆ ವಕೀಲರ ಮೂಲಕ ನೀಡಿದ ನೋಟಿಸನ್ನು ನಿ.ಪಿ.2 ಎಂದು ಗುರುತಿಸಲಾಯಿತು.

3) ಅಂಚೆ ರಶೀದಿಯನ್ನು ನಿ.ಪಿ.3 ಎಂದು ಗುರುತಿಸಲಾಯಿತು.

4) ಅಂಚೆ ಸ್ವೀಕೃತಿಯನ್ನು ನಿ.ಪಿ.4 ಎಂದು ಗುರುತಿಸಲಾಯಿತು.

ಆದಕಾರಣ ದಾವೆಯನ್ನು ಪುರಸ್ಕರಿಸಬೇಕಾಗಿ ವಿನಂತಿ.

ಪಾಟೀಸವಾಲು ಃ ಶ್ರೀ ಎಂ ಟಿ ಹೆಚ್ ವಕೀಲರಿಂದ ಃ -

ಪ್ರತಿವಾದಿ ಗೈರು ಹಾಜರಿದ್ದು ಯಾವುದೇ ಪ್ರತಿನಿಧಿ ಇರುವುದಿಲ್ಲ ಆದಕಾರಣ ಪಾಟೀಸವಾಲಿಗೆ ಅಂತಿಮ ಸಮಯವಕಾಶ ನೀಡಲಾಯಿತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)*

**ಓ. ಹೇ. ಕೇ. ಸರಿ. ಇದೆ.**

(ನವೀನ ಎಫ್. ಡಿಸೋಜಾ)

**ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಮ್.ಎಫ್.ಸಿ.**

**ನವಲಗುಂದ.**